ಕರ್ನಾಟಕ ಸರ್ಕಾರ

ಸಂಖ್ಯೆ : ಗ್ರಾಅಪ 28 ತಾಪಸ 2012

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:02.03.2012

# ಸುತ್ತೋಲೆ

**ವಿಷಯ :** ಪಹಣಿಯಲ್ಲಿ ಕೃಷಿ ಸಂಬಂಧಿತ ದಾಖಲಾತಿಗಳನ್ನು ನಮೂಧಿಸುವ ಕುರಿತು

**ಉಲ್ಲೇಖ :** ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರದ ಸಂಖ್ಯೆ: ಆಸಾಂನಿ:37:ಕೃಅಂಅಂ:2009(ಭಾಗ-3), ದಿ: 01.02.12

ವಿವಿಧ ಕೃಷಿ ಬೆಳೆಗಳ ಕ್ಷೇತ್ರ ಮತ್ತು ಉತ್ಪಾದನೆ, ಕೃಷಿ ನೀತಿ ನಿರೂಪಣೆ, ರಾಜ್ಯದ ಆಂತರಿಕ ಉತ್ಪನ್ನ, ರಾಜ್ಯಾದಾಯ, ತಲಾದಾಯ, ಕೃಷಿ ವಿಮಾ ಯೋಜನೆಯಡಿ ನಷ್ಟದ ಪ್ರಮಾಣ ಕಂಡು ಹಿಡಿಯಲು ಹೀಗೆ ಹತ್ತು ಹಲವು ಕಾರಣಗಳಿಂದ ಕೃಷಿ ಸಂಬಂಧಿತ ಅಂಕಿ ಅಂಶಗಳನ್ನು ಪಹಣಿಯಲ್ಲಿ ನಮೂಧಿಸುವುದು ಅಗತ್ಯವೆನಿಸಿದೆ. ಪ್ರಸ್ತುತ ಈ ಕಾರ್ಯಗಳನ್ನು ಕಂದಾಯ ಇಲಾಖೆಯ ಗ್ರಾಮ ಲೆಕ್ಕಿಗರು ನಿರ್ವಹಿಸುತ್ತಿದ್ದು ನಿಗಧಿತ ಸಮಯದಲ್ಲಿ ಕಾಲೋಚಿತಗೊಳಿಸುತ್ತಿಲ್ಲ. ಆದುದರಿಂದ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ,1993ರ ಪ್ರಕರಣ 58(1-A)(XV) ಮತ್ತು 61(1) (i)ರಂತೆ ಗ್ರಾಮ ಪಂಚಾಯತಿಗಳಿಗೆ ವಹಿಸಲಾದ ಪ್ರಕಾರ್ಯಗಳ ಅನುಸಾರ ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಪಂಚಾಯತಿ ಅಭಿವೃದ್ಧಿ ಅಧಿಕಾರಿ/ ಕಾರ್ಯದರ್ಶಿಯವರು ಜನಗಣತಿ, ಬೆಳೆಗಣತಿ, ಜಾನುವಾರು ಗಣತಿ, ಕೃಷಿ ಉತ್ಪಾದನೆ ಮತ್ತು ಪಶು ಸಂಪತ್ತು ಹೆಚ್ಚಳಕ್ಕೆ ಉತ್ತೇಜನ, ಇತ್ಯಾದಿಗಳಿಗೆ ಸಂಬಂಧಿಸಿದಂತೆ ಮಾಹಿತಿಗಳನ್ನು ಪಹಣಿಗಳಲ್ಲಿ ನಿಖರವಾಗಿ ನಮೂಧಿಸಲು ಕಂದಾಯ ಇಲಾಖೆಯ ಗ್ರಾಮ ಲೆಕ್ಕಿಗರದೊಂದಿಗೆ ಸಹಭಾಗಿತ್ವದಲ್ಲಿ ಕೆಲಸ ನಿರ್ವಹಿಸುವದು ಅತ್ಯಗತ್ಯವಾಗಿದೆ.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕಾರ **ಗ್ರಾಮ ಪಂಚಾಯತಿಯು ಪ್ರತಿ ಋತುವಿನಲ್ಲಿಯೂ ಪಹಣಿಯಲ್ಲಿ ಬೆಳೆ ದಾಖಲಾಗಿದೆಯೇ ಎಂದು ತಿಳಿಯಲು ಗ್ರಾಮ ಪಂಚಾಯತಿ ಅಧ್ಯಕ್ಷರುಗಳು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು/ ಕಾರ್ಯದರ್ಶಿಗಳು ವರ್ಷದಲ್ಲಿ ಮೂರು ಬಾರಿ ಅಂದರೆ ಮುಂಗಾರು ಋತುವಿನ ಪಹಣಿಯನ್ನು ಅಕ್ಟೋಬರ್ ತಿಂಗಳಿನಲ್ಲಿ, ಹಿಂಗಾರು ಋತುವಿನ ಪಹಣಿಯನ್ನು ಫೆಬ್ರವರಿ ತಿಂಗಳಿನಲ್ಲಿ ಮತ್ತು ಬೇಸಿಗೆ ಋತುವಿನ ಪಹಣಿಯನ್ನು ಮೇ ತಿಂಗಳಿನಲ್ಲಿ ಅವರ ವ್ಯಾಪ್ತಿಯಲ್ಲಿನ ಗ್ರಾಮ ಲೆಕ್ಕಿಗರ ಸಭೆ ಕರೆದು ಬೆಳೆ ದಾಖಲಾತಿಯ ವಿವರಗಳನ್ನು ಪರಿಶೀಲಿಸಿ, ಅವಶ್ಯವಿದ್ದಲ್ಲಿ ಹೊಲವನ್ನು ತಪಾಸಣೆ ಮಾಡಿ, ಬೆಳೆ ದಾಖಲಾತಿಯನ್ನು ಖಚಿತಪಡಿಸಿಕೊಂಡು ಪಹಣಿಯನ್ನು ಸರಿಪಡಿಸುವಂತೆ ಸೂಚಿಸಲಾಗಿದೆ.**

(ಡಾ.ಶಾಲಿನಿ ರಜನೀಶ್)
ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ರಾಜ್ಯದ ಎಲ್ಲಾ ಜಿಲ್ಲೆಗಳು.
2. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ರಾಜ್ಯದ ಎಲ್ಲಾ ತಾಲ್ಲೂಕುಗಳು.
3. ಅಧ್ಯಕ್ಷರುಗಳು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು / ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು ( ಇವರುಗಳಿಗೆ ಆಯಾ ತಾಲ್ಲೂಕಿನ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯವರು ಪ್ರತಿಗಳನ್ನು ರವಾನಿಸುವುದು)
4. ಶಾಖಾ ರಕ್ಷಾ ಕಡತಕ್ಕೆ / ಕಛೇರಿ ಮತ್ತು ಹೆಚ್ಚುವರಿ ಪ್ರತಿ

**ಪ್ರತಿಯನ್ನು ಮಾಹಿತಿಗಾಗಿ :**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಇವರ ಆಪ್ತ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.